**All India Radio: Bangalore**
**National Bulletin In Kannada**
**19.02.2025  19.35 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಅಭೂತಪೂರ್ವ ಪರಿವರ್ತನೆಗೆ ಭಾರತದ ಬಾಹ್ಯಾಕಾಶ ಕ್ಷೇತ್ರ ಸಾಕ್ಷಿ - ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್
2. ದೆಹಲಿ ನೂತನ ಮುಖ್ಯಮಂತ್ರಿ, ಸಚಿವ ಸಂಪುಟ ಸದಸ್ಯರಿಂದ ನಾಳೆ ಪ್ರಮಾಣವಚನ ಸ್ವೀಕಾರ
3. 'ಆರ್‌ಬಿಐ ಡೇಟಾ' ಮೊಬೈಲ್ ಅಪ್ಲಿಕೇಷನ್ ಆರಂಭಿಸಿದ ಭಾರತೀಯ ರಿಸರ್ವ್ ಬ್ಯಾಂಕ್
4. ಕೌಲಾಲಂಪುರದಲ್ಲಿ ಮಲೇಷಿಯಾ-ಭಾರತ ರಕ್ಷಣಾ ಸಹಕಾರ ಸಮಿತಿಯ ೧೩ನೇ ಸಭೆ
5. ಡಬ್ಲ್ಯೂಪಿಎಲ್ ಕ್ರಿಕೆಟ್ : ಯುಪಿ ವಾರಿಯರ್ಸ್ - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><><><>

ಭಾರತ ಇಂದು ಇತರೆ ರಾಷ್ಟ್ರಗಳನ್ನು ಅನುಸರಿಸುವ ದೇಶವಾಗಿ ಉಳಿಯದೇ, ವಿವಿಧ ಕ್ಷೇತ್ರಗಳಲ್ಲಿ ಮುಂದಾಳತ್ವ ವಹಿಸಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ವಿವಿಧ ಕ್ಷೇತ್ರಗಳ ನೇತೃತ್ವ ಹಾಗೂ ಪರಿವರ್ತನಾತ್ಮಕ ನಾವೀನ್ಯತೆಗಳ ಮೂಲಕ ಭಾರತ ಜಾಗತಿಕ ಮಾನದಂಡಗಳನ್ನು ಸ್ಥಾಪಿಸುತ್ತಿದೆ. ಭಾರತದ ಬಾಹ್ಯಾಕಾಶ ವಲಯವು ಅಭೂತಪೂರ್ವ ಪರಿವರ್ತನೆಗೆ ಸಾಕ್ಷಿಯಾಗಿದೆ ಹಾಗೂ ಮಹತ್ವಾಕಾಂಕ್ಷೆಯ ಕಾರ್ಯಾಚರಣೆಗಳು ಮತ್ತು ಅಂತಾರಾಷ್ಟ್ರೀಯ ಸಹಯೋಗಗಳಲ್ಲಿ ಹೆಚ್ಚಳವಾಗಿದೆ ಎಂದು ಹೇಳಿದರು. ಬಾಹ್ಯಾಕಾಶ ಡಾಕಿಂಗ್ ಪ್ರಯೋಗ-ಸ್ಪೇಡೆಕ್ಸ್ ಭಾರತದ ತಾಂತ್ರಿಕ ಪ್ರಗತಿಯ ಸಂಕೇತವಾಗಿದ್ದು, ಗಗನಯಾನ, ಚಂದ್ರಯಾನ-೪ ಮತ್ತು ಭಾರತೀಯ ಅಂತರಿಕ್ಷ ನಿಲ್ದಾಣ ಸೇರಿದಂತೆ ಭವಿಷ್ಯದ ಬಾಹ್ಯಾಕಾಶ ಕಾರ್ಯಾಚರಣೆಗಳಿಗೆ ದಾರಿ ಮಾಡಿಕೊಡುತ್ತದೆ. ಭಾರತ ಉಪಗ್ರಹ ಉಡಾವಣೆಗಳಿಗೆ ಆದ್ಯತೆಯ ತಾಣವಾಗಿ ಹೊರಹೊಮ್ಮಿದ್ದು, ಜಾಗತಿಕ ವಿಶ್ವಾಸಾರ್ಹತೆಯನ್ನು ಗಳಿಸಿದೆ ಎಂದರು. ಇಲ್ಲಿಯವರೆಗೆ ಭಾರತ ೪೩೩ ವಿದೇಶಿ ಉಪಗ್ರಹಗಳನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ. ಅವುಗಳಲ್ಲಿ ೩೯೮ ಉಪಗ್ರಹಗಳನ್ನು ಕಳೆದ ಒಂದು ದಶಕದಲ್ಲೇ ಉಡಾವಣೆ ಮಾಡಲಾಗಿದೆ.  ನಾಸಾ ಸೇರಿದಂತೆ ವಿಶ್ವದ ಪ್ರಮುಖ ಬಾಹ್ಯಾಕಾಶ ಸಂಸ್ಥೆಗಳು ಈಗ ಚಂದ್ರನ ದಕ್ಷಿಣ ಧ್ರುವದಿಂದ ಭಾರತದ ಸಂಶೋಧನೆಗಳಿಗಾಗಿ ಕಾಯುತ್ತಿವೆ. ಇದು ಬಾಹ್ಯಾಕಾಶ ಸಂಶೋಧನೆಯಲ್ಲಿ ರಾಷ್ಟ್ರದ

ಹೆಚ್ಚುತ್ತಿರುವ ಪ್ರಾಬಲ್ಯವನ್ನು ಒತ್ತಿಹೇಳುವ ಮೈಲಿಗಲ್ಲಾಗಿದೆ ಎಂದು ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದರು.

<><><><>

ದೆಹಲಿ ನೂತನ ಮುಖ್ಯಮಂತ್ರಿ ಮತ್ತು ಸಚಿವ ಸಂಪುಟದ ಪ್ರಮಾಣವಚನ ಸ್ವೀಕಾರ ಸಮಾರಂಭವು ನಾಳೆ ನವದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆಯಲಿದೆ. ಲೆಫ್ಟಿನೆಂಟ್ ಗವರ್ನರ್ ವಿ.ಕೆ. ಸಕ್ಸೇನಾ ಅವರು, ನಿಯೋಜಿತ ಮುಖ್ಯಮಂತ್ರಿ ಮತ್ತು ಸಚಿವ ಸಂಪುಟಕ್ಕೆ ಪ್ರಮಾಣವಚನ ಬೋಧಿಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಕೇಂದ್ರ ಸಚಿವರು ಹಾಗೂ ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಈ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

<><><><>

ಛತ್ರಪತಿ ಶಿವಾಜಿ ಮಹಾರಾಜರ ೩೯೫ ನೇ ಜನ್ಮ ದಿನಾಚರಣೆಯನ್ನು ಇಂದು ದೇಶಾದ್ಯಂತ ಆಚರಿಸಲಾಯಿತು. ೧೬೩೦ ರ ಈ ದಿನದಂದು ಮಹಾರಾಷ್ಟ್ರದ ಪುಣೆ ಜಿಲ್ಲೆಯ ಶಿವನೇರಿ ಕೋಟೆಯಲ್ಲಿ ಜನಿಸಿದ ಛತ್ರಪತಿ ಶಿವಾಜಿ ಮಹಾರಾಜರು, ಹಿಂದವಿ ಸಾಮ್ರಾಜ್ಯಕ್ಕೆ ಅಡಿಪಾಯ ಹಾಕಿ, ಮೊಘಲ್ ಆಳ್ವಿಕೆಗೆ ಸವಾಲು ಹಾಕಿದರು. ಅವರ ಪ್ರಬಲ ನಾಯಕತ್ವ, ಸೇನಾ ಕುಶಾಗ್ರಮತಿ, ಶೌರ್ಯ, ಬುದ್ಧಿವಂತಿಕೆ ಮತ್ತು ನಿರಂತರ ಸ್ವರಾಜ್ಯದ ಪರಿಕಲ್ಪನೆಯು ವ್ಯಾಪಕ ಮೆಚ್ಚುಗೆ ಪಾತ್ರವಾಗಿದೆ. ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯಂದು ಅವರಿಗೆ ಪ್ರಧಾನಿ ನರೇಂದ್ರ ಮೋದಿ, ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ, ಛತ್ರಪತಿ ಶಿವಾಜಿ ಮಹಾರಾಜರ ಶೌರ್ಯ ಮತ್ತು ದೂರದೃಷ್ಟಿಯ ನಾಯಕತ್ವವು ಸ್ವರಾಜ್ಯಕ್ಕೆ ಅಡಿಪಾಯ ಹಾಕಿತು. ಭವಿಷ್ಯದ ಪೀಳಿಗೆಗಳು ಧೈರ್ಯ ಮತ್ತು ನ್ಯಾಯದ ಮೌಲ್ಯಗಳನ್ನು ಎತ್ತಿಹಿಡಿಯಲು ಪ್ರೇರೇಪಿಸಿತು ಎಂದು ಹೇಳಿದ್ದಾರೆ. ಬಲವಾದ, ಸ್ವಾವಲಂಬಿ ಮತ್ತು ಸಮೃದ್ಧ ರಾಷ್ಟ್ರವನ್ನು ನಿರ್ಮಿಸುವಲ್ಲಿ ನಾಗರಿಕರಿಗೆ ಛತ್ರಪತಿ ಶಿವಾಜಿ ಮಹಾರಾಜರು ಸದಾ ಪ್ರೇರಣೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದ್ದಾರೆ.

<><><><>

ಛತ್ರಪತಿ ಶಿವಾಜಿ ಮಹಾರಾಜರ ೩೯೫ನೇ ಜನ್ಮ ದಿನಾಚರಣೆ ಸಂದರ್ಭದಲ್ಲಿ ಇಂದು ಪುಣೆಯಲ್ಲಿ ನಡೆದ ಪಾದಯಾತ್ರೆಯಲ್ಲಿ ಕೇಂದ್ರ ಯುವಜನ ಮತ್ತು ಕ್ರೀಡಾಸಚಿವ ಮನ್ಸುಖ್ ಮಾಂಡವೀಯ ಭಾಗವಹಿಸಿದ್ದರು. ಕೇಂದ್ರ ಯುವಜನ ಮತ್ತು ಕ್ರೀಡಾ ಸಚಿವಾಲಯ, ಮಹಾರಾಷ್ಟ್ರ ಸರ್ಕಾರ ಮತ್ತು ಪುಣೆ ಜಿಲ್ಲಾಡಳಿತ ಆಯೋಜಿಸಿದ್ದ ಈ ಪಾದಯಾತ್ರೆಯು ಸರ್ಕಾರಿ ಎಂಜಿನಿಯರಿಂಗ್ ಮೈದಾನದಿಂದ ಆರಂಭವಾಗಿ ಫರ್ಗುಸನ್ ಕಾಲೇಜಿಗೆ ತಲುಪಿತು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಮನ್ಸುಖ್ ಮಾಂಡವೀಯ, ಛತ್ರಪತಿ ಶಿವಾಜಿ ಮಹಾರಾಜರು ಆದರ್ಶ ಆಡಳಿತ ಮತ್ತು ಮಹಿಳೆಯರ ಮೇಲಿನ ಗೌರವದ ಮೂಲಕ ಹಿಂದವಿ ಸ್ವರಾಜ್ಯಕ್ಕೆ ಅಡಿಪಾಯ

ಹಾಕಿದರು. ಅದರಂತೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಶಿವಾಜಿ ಮಹಾರಾಜರ ತತ್ವಗಳಿಂದ ಪ್ರೇರಿತರಾಗಿ ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಲು ಕೆಲಸ ಮಾಡುತ್ತಿದೆ ಎಂದು ಹೇಳಿದರು.

**ಧ್ವನಿ : ಮನ್ಸುಖ್ ಮಾಂಡವೀಯ (೧೯ ಸೆಕೆಂಡ್ಸ್)**

ಪಾದಯಾತ್ರೆಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡಿದ್ದರು.

<><><>

'ಆರ್‌ಬಿಐ ಡೇಟಾ' ಎಂಬ ಮೊಬೈಲ್ ಅಪ್ಲಿಕೇಷನ್ ಅನ್ನು ಭಾರತೀಯ ರಿಸರ್ವ್ ಬ್ಯಾಂಕ್ - ಆರ್‌ಬಿಐ ಪ್ರಾರಂಭಿಸಿದೆ. ಇದು ಬಳಕೆದಾರರಿಗೆ ಭಾರತೀಯ ಆರ್ಥಿಕತೆಗೆ ಸಂಬಂಧಿಸಿದ ಸ್ಥೂಲ ಆರ್ಥಿಕ ಮತ್ತು ಹಣಕಾಸು ಅಂಕಿ-ಅಂಶಗಳನ್ನು ಬಳಕೆದಾರ ಸ್ನೇಹಿ ಮತ್ತು ಆಕರ್ಷಕ ಸ್ವರೂಪದಲ್ಲಿ ನೀಡಲು ವಿನ್ಯಾಸಗೊಳಿಸಲಾಗಿದೆ. ಈ ಅಪ್ಲಿಕೇಷನ್ ಭಾರತೀಯ ಆರ್ಥಿಕತೆಗೆ ಸಂಬಂಧಿಸಿದ ೧೧ ಸಾವಿರಕ್ಕೂ ಹೆಚ್ಚು ವಿಭಿನ್ನ ಆರ್ಥಿಕ ದತ್ತಾಂಶಗಳಿಗೆ ಪ್ರವೇಶವನ್ನು ಒದಗಿಸುತ್ತದೆ. ಬಳಕೆದಾರರು ವಿಶ್ಲೇಷಣೆಗಾಗಿ ದತ್ತಾಂಶವನ್ನು ಡೌನ್‌ಲೋಡ್ ಮಾಡಬಹುದು. ಇದರಲ್ಲಿರುವ ಬ್ಯಾಂಕಿಂಗ್ ಔಟ್‌ಲೆಟ್ ವಿಭಾಗವು ಬಳಕೆದಾರರು ತಮ್ಮ ಸ್ಥಳದಿಂದ ೨೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಬ್ಯಾಂಕಿಂಗ್ ಸೌಲಭ್ಯವನ್ನು ಹುಡುಕಲು ಸಹಾಯ ಮಾಡುತ್ತದೆ ಎಂದು ಆರ್‌ಬಿಐ ತಿಳಿಸಿದೆ.

<><><>

ಮಲೇಷಿಯಾದ ಕೌಲಾಲಂಪುರದಲ್ಲಿ ಇಂದು ಮಲೇಷಿಯಾ-ಭಾರತ ರಕ್ಷಣಾ ಸಹಕಾರ ಸಮಿತಿಯ ೧೩ನೇ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಮತ್ತು ಮಲೇಷಿಯಾದ ರಕ್ಷಣಾ ಸಚಿವಾಲಯದ ಪ್ರಧಾನ ಕಾರ್ಯದರ್ಶಿ ಲೋಕ್‌ಮಾನ್ ಹಕೀಮ್ ಬಿನ್ ಅಲಿ ವಹಿಸಿದ್ದರು. ದ್ವಿಪಕ್ಷೀಯ ಸಹಕಾರದ ಬಲಪಡಿಸುವ ಜೊತೆಗೆ ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳ ಪರಿಹಾರಕ್ಕೆ ಮತ್ತಷ್ಟು ಪರಿಣಾಮಕಾರಿ ಮತ್ತು ಪ್ರಾಯೋಗಿಕ ಉಪಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸೈಬರ್ ಭದ್ರತೆ ಮತ್ತು ಕೃತಕಬುದ್ಧಿಮತ್ತೆ-ಎಐ ನಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ ಉಭಯ ದೇಶಗಳ ಸಹಕಾರವನ್ನು ಮತ್ತಷ್ಟು ಹೆಚ್ಚಿಸಲು ಪರಸ್ಪರ ಸಮ್ಮತಿ ಸೂಚಿಸಿದರು. ವಿಶೇಷವಾಗಿ ರಕ್ಷಣಾ ಉದ್ಯಮ, ಕಡಲ ಭದ್ರತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಯೋಗವನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

<><><>

ಭಾರತದ ಪ್ರಮುಖ ಹಡಗು ನಿರ್ಮಾಣ ಯಾರ್ಡ್‌ಗಳಲ್ಲಿ ಒಂದಾದ ಗೋವಾ ಶಿಪ್‌ಯಾರ್ಡ್ ಲಿಮಿಟೆಡ್ - ಜಿಎಸ್‌ಎಲ್, ಅಬುದಾಬಿಯಲ್ಲಿ ನಡೆಯಲಿರುವ ಎನ್‌ಎವಿಡಿಇಎಕ್ಸ್ - ೨೦೨೫ ರಲ್ಲಿ ಸ್ಥಳೀಯವಾಗಿ ವಿನ್ಯಾಸಗೊಳಿಸಲಾದ ವೇಗ ಗಸ್ತು ಹಡಗುಗಳು ಮತ್ತು ಆಫ್‌ಶೋರ್ ಪೆಟ್ರೋಲ್

ಹಡಗುಗಳನ್ನು ಪ್ರದರ್ಶಿಸಲಿದೆ. ಈ ಹಡಗುಗಳು ಮೇಕ್ ಇನ್ ಇಂಡಿಯಾ ಉಪಕ್ರಮದಡಿಯಲ್ಲಿ ನೌಕಾ ನಾವಿನ್ಯತೆ ಮತ್ತು ಸ್ವಾವಲಂಬನೆಯಲ್ಲಿ ಭಾರತದ ಬೆಳೆಯುತ್ತಿರುವ ಸಾಮರ್ಥ್ಯವನ್ನು ತೋರಿಸುತ್ತದೆ. ಗೋವಾ ಶಿಪ್‌ಯಾರ್ಡ್ ಲಿಮಿಟೆಡ್ ವಿನ್ಯಾಸ ಮತ್ತು ನಿರ್ಮಾಣ ಮಾಡಿರುವ ವೇಗಗಸ್ತು ಹಡಗುಗಳು ೫೦ ಮೀಟರ್ ಉದ್ದವಿದ್ದು, ೩೫ ನಾಟಿಕಲ್ ಮೈಲುಗಳನ್ನು ತಲುಪುವ ಸಾಮರ್ಥ್ಯವಿರುವ ಹೈಸ್ಪೀಡ್ ಹಡಗುಗಳಾಗಿವೆ. ಇದನ್ನು ಗಸ್ತು ತಿರುಗುವಿಕೆ, ಕಳ್ಳಸಾಗಾಣೆ ವಿರೋಧಿ ಮತ್ತು ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಇದೇ ವೇಳೆ ಆಫ್ ಶೋರ್ ಪೆಟ್ರೋಲ್ ಹಡಗುಗಳನ್ನು, ಯುದ್ಧ ಕಾರ್ಯಾಚರಣೆಗಳು, ಕಡಲ್ಗಳತನ ವಿರೋಧಿ ಕಾರ್ಯಾಚರಣೆ, ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಸೇರಿದಂತೆ ವಿವಿಧ ಕಾರ್ಯಾಚರಣೆಗಳಿಗಾಗಿ ವಿನ್ಯಾಸಗೊಳಿಸಲಾಗಿದೆ.

<><><>

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳಕ್ಕೆ ಲಕ್ಷಾಂತರ ಭಕ್ತರು ಆಗಮಿಸುತ್ತಿದ್ದಾರೆ. ಜನವರಿ ೧೩ ರಂದು ಮಹಾಕುಂಭಮೇಳ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ೫೬ ಕೋಟಿ ೧೨ ಲಕ್ಷ ಭಕ್ತರು ಗಂಗೆ, ಯಮುನಾ ಮತ್ತು ಸರಸ್ವತಿ ನದಿಗಳ ಸಂಗಮವಾದ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ಈ ತ್ರಿವೇಣಿ ಸಂಗಮದ ಸಮೀಪದ ಸೆಕ್ಟರ್-೨ ರಲ್ಲಿರುವ ಬಡೆ ಹನುಮಾನ್ ದೇವಾಲಯವು ಈ ಮಹಾಕುಂಭಮೇಳದ ಪ್ರಮುಖ ಆಕರ್ಷಣೆಗಳಲ್ಲಿ ಒಂದಾಗಿದೆ. ಈ ದೇವಾಲಯವು ಅಪಾರ ಸಾಂಸ್ಕೃತಿಕ ಮತ್ತು ಧಾರ್ಮಿಕ ಮಹತ್ವವನ್ನು ಹೊಂದಿದೆ. ಇದೇ ವೇಳೆ, ಇಸ್ರೋದ ಮಾಜಿ ಅಧ್ಯಕ್ಷ ಎಸ್. ಸೋಮನಾಥ್ ಅವರು, ತಮ್ಮ ಕುಟುಂಬದೊಂದಿಗೆ ಇಂದು ಮಹಾಕುಂಭಮೇಳದಲ್ಲಿ ಭಾಗವಹಿಸಿ, ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದರು.

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಮಣ್ಣು ಆರೋಗ್ಯ ಕಾರ್ಡ್ ಯೋಜನೆ ಜಾರಿಗೊಂಡು ಇಂದಿಗೆ ೧೦ ವರ್ಷ ಪೂರ್ಣಗೊಂಡಿದೆ. ೨೦೧೫ರ ಫೆಬ್ರವರಿ ೧೯ರಂದು ರಾಜಸ್ಥಾನದ ಸುರಘರ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ಯೋಜನೆಗೆ ಚಾಲನೆ ನೀಡಿದ್ದರು. ದೇಶದ ಎಲ್ಲಾ ರೈತರಿಗೆ ಮಣ್ಣಿನ ಆರೋಗ್ಯ ಕಾರ್ಡ್‌ಗಳನ್ನು ವಿತರಿಸಲು ತೀರ್ಮಾನಿಸಿ, ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಲಾಯಿತು. ಈ ಕಾರ್ಡ್‌ನಿಂದ ರೈತರು ತಮ್ಮ ಮಣ್ಣಿನಲ್ಲಿರುವ ಪೋಷಕಾಂಶಗಳ ಸ್ಥಿತಿಗತಿಯನ್ನು ಅರಿಯಲು ಸಹಾಯವಾಗುತ್ತದೆ.

<><><>

ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್‌ನಲ್ಲಿ ಗುಜರಾತ್‌ನ ವಡೋದರಾದ ಕೋಟಂಬಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್

ತಂಡಗಳು ಮುಖಾಮುಖಿಯಾಗಿದ್ದು, ಟಾಸ್ ಗೆದ್ದಿರುವ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ದುಕೊಂಡಿದೆ.

<><><>

ಪಾಕಿಸ್ತಾನದ ಕರಾಚಿಯಲ್ಲಿ ನಡೆಯುತ್ತಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್‌ನ ಉದ್ಘಾಟನಾ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ನ್ಯೂಜಿಲ್ಯಾಂಡ್ ತಂಡಗಳು ಮುಖಾಮುಖಿಯಾಗಿವೆ. ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ನಿಗದಿತ ೫೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೩೨೦ ರನ್ ಮಾಡಿದೆ. ೩೨೧ ರನ್‌ಗಳ ಗುರಿ ಬೆನ್ನತ್ತಿರುವ ಪಾಕಿಸ್ತಾನ, ಇತ್ತೀಚಿನ ವರದಿ ಬಂದಾಗ, ೮.೧ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೨೦ ರನ್ ಮಾಡಿ ಆಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>